ನ್ಯಾಯಾಲಯಗಳಲ್ಲಿ ಖಾಲಿ ಇರತಕ್ಕ ನ್ಯಾಯಾಧೀಶರ ಹುದ್ದೆಗಳನ್ನು ಭರ್ತಿ

171 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ವಿವಿಧ ನ್ಯಾಯಾಲಯಗಳಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯವೂ ಸೇರಿದಂತೆ ಖಾಲಿ ಇರತಕ್ಕ ನ್ಯಾಯಾಧೀಶರುಗಳ ಹುದ್ದೆಗಳ ಸಂಖ್ಯೆ ಎಷ್ಟು.

ಆ) ಆ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) 9 (ಒಂಭತ್ತು)

ಆ) ಪ್ರಸ್ತಾವನೆ ಉಚ್ಚ ನ್ಯಾಯಾಲಯದಿಂದ ಬಂದ ನಂತರ, ಸರ್ಕಾರದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ರಾಜ್ಯದಲ್ಲಿ ಕುರಿಗಳನ್ನು ಉತ್ತಮ ಪಡಿಸುವ ಬಗ್ಗೆ

172 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಪಶು ಸಂಗೋಪನಾ ರಾಜ್ಯ ಸಚಿವರು ಈ ಕೆಳ ಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕುರಿ ಮತ್ತು ಕುರಿ ಉತ್ಪನ್ನ ಮಂಡಳಿ ಹಾಗೂ ಪಶು ಸಂಗೋಪನಾ ಇಲಾಖೆ ಸ್ಥಳೀಯ ಜಾತಿಗಳ ಕುರಿಗಳನ್ನು ಉತ್ತಮಪಡಿಸಲು ಕೈಗೊಂಡಿರುವ ಕ್ರಮಗಳೇನು?

ಆ) ರಾಜ್ಯದಲ್ಲಿರತಕ್ಕ ಕುರಿ ಸಾಕಾಣಿಕಾ ಕ್ಷೇತ್ರಗಳು, ಕುರಿ ಮತ್ತು ಉಣ್ಣೆ ಅಭಿವೃದ್ಧಿ ಕೇಂದ್ರಗಳು ಮತ್ತು ಕುರಿ ಪೋಷಕರ ಸಂಘಗಳ ಸಂಖ್ಯೆ ಎಷ್ಟು?

ಇ) ಇವುಗಳಿಗಾಗಿ 1995-96ನೇ ಸಾಲಿನಲ್ಲಿ ಒದಗಿಸಲಾಗಿರುವ ಹಣವೆಷ್ಟು?

ಈ) 1995-96ನಲ್ಲಿ ಎಷ್ಟು ಕುರಿ ಸಾಕಾಣಿಕಾ ಕ್ಷೇತ್ರಗಳು, ಕುರಿ ಮತ್ತು ಉಣ್ಣೆ ಅಭಿವೃದ್ಧಿ ಕೇಂದ್ರಗಳು ಹಾಗೂ ಕುರಿ ಪೋಷಕರ ಸ್ಥಾಪಿಸಲಾಗುವುದು.

ಉ) ಕುರಿ ಆರೋಗ್ಯ ರಕ್ಷಣೆ, ಉಣ್ಣೆಯನ್ನು ಕತ್ತರಿಸಿ ರೈತರಿಗೆ ಉತ್ತಮ ಬೆಲೆ ಒದಗಿಸುವ ಬಗ್ಗೆ ಕುರಿ ಮತ್ತು ಕುರಿ ಉತ್ಪನ್ನಗಳ ಅಭಿವೃದ್ಧಿ ಮಂಡಳಿ ಕೈಗೊಳ್ಳಲಿರುವ ಕಾರ್ಯಕ್ರಮಗಳೇನು?

ಊ) ಕುರಿ ಮತ್ತು ಕುರಿ ಉತ್ಪನ್ನ ಮಂಡಳಿಗೆ ಅಧಿಕಾರೇತರರನ್ನು ಅಧ್ಯಕ್ಷರನ್ನಾಗಿ ನೇಮಿಸಲಾಗಿದೆಯೇ?

ಋ) ಈ ಮಂಡಳಿಯನ್ನು ನಿಗಮವನ್ನಾಗಿ ಪರಿವರ್ತಿಸಲು ಸರ್ಕಾರ ಉದ್ದೇಶಿಸಲಾಗಿದೆಯೇ?

ಶ್ರೀ ಬಿ.ಎನ್. ಬಚ್ಚೇಗೌಡ (ಪಶುಸಂಗೋಪನಾ ರಾಜ್ಯ ಸಚಿವರು) :